**Bangalore**
**Regional News**
**28.04.2026 / 14.30 hrs**
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. ಉಡುಪಿಯಲ್ಲಿ ಐಐಜಿಜೆ ಸಂಸ್ಥೆಯ ನೂತನ ಕಚೇರಿ ಉದ್ಘಾಟಿಸಿದ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್; ಉದ್ಯಮಿಗಳೊಂದಿಗೆ ಸಂವಾದ

೨. ಹೈಕಮಾಂಡ್ ಬಯಸಿದರೆ ಮುಖ್ಯಮಂತ್ರಿ ರಾಜೀನಾಮೆ ನೀಡಲು ಸಿದ್ಧ- ಮಾಜಿ ಸಚಿವ ಕೆ.ಎನ್.ರಾಜಣ್ಣ ಸ್ಪಷ್ಟನೆ

೩. ಜಾಗತಿಕ ತಾಪಮಾನ ಏರಿಕೆ ಪರಿಣಾಮ ತಗ್ಗಿಸಲು ಕ್ರಿಯಾ ಯೋಜನೆ ರೂಪಿಸಿದ ರಾಜ್ಯ ಸರ್ಕಾರ

೪. ಲೋಕಭವನದಲ್ಲಿ ನವೀಕೃತ ಸ್ವಾಗತ ಕೇಂದ್ರ ಹಾಗೂ ಕಾಮಧೇನು ಲೋಕ ಉದ್ಘಾಟಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ

೫. ರಾಷ್ಟ್ರೀಯ ಭದ್ರತೆ ವಿಷಯದಲ್ಲಿ ಕಾಂಗ್ರೆಸ್‌ನಿಂದ ಮತ ಬ್ಯಾಂಕ್ ರಾಜಕೀಯ- ಪ್ರತಿಪಕ್ಷ ನಾಯಕ ಆರ್.ಅಶೋಕ ಆರೋಪ

**<><*<><>*><>**

ಕೇಂದ್ರ ಹಣಕಾಸು ಮತ್ತು ಕಾರ್ಪೋರೇಟ್ ವ್ಯವಹಾರಗಳ ಸಚಿವೆ ನಿರ್ಮಲಾ ಸೀತಾರಾಮನ್ ಉಡುಪಿಯಲ್ಲಿ ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಜೆಮ್ಸ್ ಅಂಡ್ ಜ್ಯುವೆಲ್ಲರಿ ಸಂಸ್ಥೆಯ ನೂತನ ಆವರಣವನ್ನು ಇಂದು ಉದ್ಘಾಟಿಸಿದರು. ಇದೇ ವೇಳೆ ವಿದ್ಯಾರ್ಥಿಗಳು ಸಿದ್ಧಪಡಿಸಿದ 'ವಿನ್ಯಾಸದಿಂದ ಉತ್ಪಾದನೆಯವರೆಗಿನ' ಪ್ರಾತ್ಯಕ್ಷಿಕೆಯನ್ನು ವೀಕ್ಷಿಸಿದರು. ಬಳಿಕ ಅವರು ಪ್ರಧಾನ ಮಂತ್ರಿ ವಿಶ್ವಕರ್ಮ ಯೋಜನೆಯಡಿ ತರಬೇತಿ ಪಡೆಯುತ್ತಿರುವ ಶಿಕ್ಷಣಾರ್ಥಿಗಳೊಂದಿಗೆ ಸಂವಾದ ನಡೆಸಿದರು. ಐಐಜಿಜೆಯಲ್ಲಿ ಇದುವರೆಗೆ ೨೭೦ಕ್ಕೂ ಹೆಚ್ಚು ಅಭ್ಯರ್ಥಿಗಳು ಪಿಎಂ ವಿಶ್ವಕರ್ಮ ಯೋಜನೆಯಡಿ ತರಬೇತಿ ಪಡೆದಿದ್ದಾರೆ. ೨೦೧೭ರಲ್ಲಿ ವಾಣಿಜ್ಯ ಮತ್ತು ಕೈಗಾರಿಕಾ ಸಚಿವೆಯಾಗಿದ್ದ ಸಂದರ್ಭದಲ್ಲಿ, ನಿರ್ಮಲಾ ಸೀತಾರಾಮನ್ ಯುವಜನರು ಮತ್ತು ಮಹಿಳೆಯರಲ್ಲಿ ಉದ್ಯೋಗಾವಕಾಶಗಳನ್ನು ಹೆಚ್ಚಿಸುವ ಗುರಿಯೊಂದಿಗೆ, ತಮ್ಮ ಸಂಸದರ ಸ್ಥಳೀಯ

ಪ್ರದೇಶಾಭಿವೃದ್ಧಿ ನಿಧಿ  ಹಾಗೂ ರತ್ನ ಮತ್ತು ಆಭರಣ ರಫ್ತು ಉತ್ತೇಜನಾ ಮಂಡಳಿ ಮತ್ತು ಅಹಮದಾಬಾದ್ ನ ರಾಷ್ಟ್ರೀಯ ವಿನ್ಯಾಸ ಸಂಸ್ಥೆಯ ಬೆಂಬಲದೊಂದಿಗೆ ಉಡುಪಿಯಲ್ಲಿ ಐಐಜಿಜೆ ಸಂಸ್ಥೆಗೆ ಶಂಕುಸ್ಥಾಪನೆ ನೆರವೇರಿಸಿದ್ದರು. ಕೈಗಳ ನೈಪುಣ್ಯತೆಯಿಂದ ಸಿದ್ಧಪಡಿಸುವ ಆಭರಣ ತಯಾರಿಕೆಯ ವಿವಿಧ ಆಯಾಮಗಳಲ್ಲಿ ತರಬೇತಿ ನೀಡುವ ಮೂಲಕ, ಈ ಸಂಸ್ಥೆಯು ರತ್ನ ಹಾಗೂ ಆಭರಣ ವಲಯದಲ್ಲಿ ಹಲವಾರು ಉದ್ಯೋಗ ಮತ್ತು ಉದ್ಯಮಶೀಲತೆಯ ಅವಕಾಶಗಳನ್ನು ಸೃಷ್ಟಿಸುತ್ತಿದೆ.  ಇದು ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಉದ್ಯೋಗಿಗಳ ವೃತ್ತಿ ಕೌಶಲ್ಯವನ್ನು ಹೆಚ್ಚಿಸಲೂ ಗಮನಹರಿಸುತ್ತದೆ. ಈ ಸಂಸ್ಥೆಯು ಎಕ್ಸ್-ಆರ್-ಎಫ್  ಚಿನ್ನದ ಶುದ್ಧತೆ ಪರೀಕ್ಷೆ, ಕ್ಯಾಡ್ ತಂತ್ರಾಂಶ, ಕಾಸ್ಟಿಂಗ್ ಯಂತ್ರಗಳು, ಪ್ಲೇಟಿಂಗ್ ಘಟಕಗಳು ಮತ್ತು ಸಂಪೂರ್ಣ ಉತ್ಪಾದನಾ ಸರಣಿಯ ಸೌಲಭ್ಯಗಳು ಸೇರಿದಂತೆ ೪೧ ಅತ್ಯಾಧುನಿಕ ಆಭರಣ ತಯಾರಿಕಾ ಯಂತ್ರೋಪಕರಣಗಳನ್ನು ಹೊಂದಿದೆ. ಇದು ತರಬೇತಿ ಮತ್ತು ಸಾಮಾನ್ಯ ಸೌಲಭ್ಯ ಕೇಂದ್ರ ಸೇವೆಗಳನ್ನು ಒದಗಿಸುತ್ತದೆ. ಐಐಜಿಜೆ-ಉಡುಪಿಯು ೭೩೨ ಆಭರಣ ಕುಶಲಕರ್ಮಿಗಳಿಗೆ "ಪರಿಚಯ ಕಾರ್ಡ್" ನೋಂದಣಿ ಮಾಡಿಸುವ ಮೂಲಕ ಅವರನ್ನು ಔಪಚಾರಿಕ ವಲಯಕ್ಕೆ ತರುವಲ್ಲಿ ಪ್ರಮುಖ ಪಾತ್ರ ವಹಿಸಿದೆ.  ನಿರ್ಮಲಾ ಸೀತಾರಾಮನ್ ಅವರು, ಮಂಗಳೂರಿನ ದೇರಳಕಟ್ಟೆಯ ಕೆ.ಎಸ್.ಹೆಗ್ಡೆ ಕ್ಷೇಮ ಸಭಾಂಗಣದಲ್ಲಿ ಇಂದು 'ವಿಕಸಿತ ಭಾರತ-೨೦೪೭; ಒಂದು ದೃಷ್ಟಿಕೋನ' ವಿಷಯವಾಗಿ, ನಿಟ್ಟೆ ವಿನಯ್ ಹೆಗ್ಡೆ ಸ್ಮಾರಕ ಉಪನ್ಯಾಸ ನೀಡಿ, ಸಂವಾದ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ. ಸುಪ್ರೀಂಕೋರ್ಟ್ ನಿವೃತ್ತ ನ್ಯಾಯಮೂರ್ತಿ ಹಾಗೂ ಮಾಜಿ ಲೋಕಾಯುಕ್ತ ನ್ಯಾಯಮೂರ್ತಿ ಎನ್.ಸಂತೋಷ್ ಹೆಗ್ಡೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

**<><*<><>*><>**

ಹೈಕಮಾಂಡ್ ಬಯಸಿದರೆ ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆ ನೀಡಲು ಸಿದ್ಧ ಎಂದು ಮಾಜಿ ಸಚಿವ ಕೆ.ಎನ್.ರಾಜಣ್ಣ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾಯಕತ್ವ ಬದಲಾವಣೆ ವಿಷಯದಲ್ಲಿ ಪಕ್ಷದೊಳಗೆ ಗೊಂದಲ ಹೆಚ್ಚುತ್ತಿದೆ ಎಂದು ಹೇಳಿದ್ದಾರೆ. ಕಾಂಗ್ರೆಸ್ ಹಿರಿಯ ನಾಯಕ ರಾಹುಲ್ ಗಾಂಧಿ ತೆಗೆದುಕೊಳ್ಳುವ ಯಾವುದೇ ನಿರ್ಧಾರಕ್ಕೆ ಮುಖ್ಯಮಂತ್ರಿ ಬದ್ಧರಾಗಿದ್ದಾರೆ. ಆದರೆ, ಸಿದ್ದರಾಮಯ್ಯ ಅವರೇ ಮುಖ್ಯಮಂತ್ರಿಯಾಗಿ ಮುಂದುವರಿಯಬೇಕು ಎಂದು ತಮ್ಮನ್ನು ಒಳಗೊಂಡಂತೆ ಅನೇಕ ನಾಯಕರು ಹೈಕಮಾಂಡ್‌ಗೆ ತಿಳಿಸಿದ್ದಾರೆ ಎಂದು ಕೆ.ಎನ್.ರಾಜಣ್ಣ ಸ್ಪಷ್ಟಪಡಿಸಿದ್ದಾರೆ. ಇದೇ ವೇಳೆ, ಪರಿಶಿಷ್ಟ ನಾಯಕರಿಗೆ ಮುಖ್ಯಮಂತ್ರಿ ಸ್ಥಾನ ಸಿಗಬೇಕು ಎಂಬ ನಿಲುವನ್ನು ಅವರು ಪುನರುಚ್ಚರಿಸಿದ್ದಾರೆ.

**<><*<><>*><>**

ರಾಜ್ಯದಲ್ಲಿ ಸಂಭಾವ್ಯ ನಾಯಕತ್ವ ಬದಲಾವಣೆಯ ಬಗ್ಗೆ ನಡೆಯುತ್ತಿರುವ ಊಹಾಪೋಹಾಗಳ ನಡುವೆ ಹೈಕಮಾಂಡ್ ಸ್ಪಷ್ಟನೆ ನೀಡಬೇಕು ಎಂದು ಸಚಿವ ಸತೀಶ್ ಜಾರಕಿಹೊಳಿ ಒತ್ತಾಯಿಸಿದ್ದಾರೆ. ನವದೆಹಲಿಯಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆ ಅವರನ್ನು ಭೇಟಿ ಮಾಡಿ, ನಾಯಕತ್ವ ಬದಲಾವಣೆಯ ಕುರಿತು ಸ್ಪಷ್ಟನೆ ಕೋರಿ, ಮನವಿ ಸಲ್ಲಿಸಿದ್ದಾರೆ. ನಾಯಕತ್ವ ಬದಲಾವಣೆ ಕುರಿತು ನಡೆಯುತ್ತಿರುವ ಚರ್ಚೆ ಪಕ್ಷಕ್ಕೆ ಅನಾನುಕೂಲತೆ ಉಂಟುಮಾಡುತ್ತಿದ್ದು, ಆಂತರಿಕ ಅನಿಶ್ಚಿತತೆ ಹೆಚ್ಚುತ್ತಿದೆ ಎಂದು ಮಲ್ಲಿಕಾರ್ಜುನ್ ಖರ್ಗೆ ಅವರ ಗಮನಕ್ಕೆ ತರಲಾಗಿದೆ ಎಂದು ಐಎನ್‌ಎಸ್ ಸಂಸ್ಥೆ ವರದಿ ಮಾಡಿದೆ.

<><*<><>*><>

ಜಾಗತಿಕ ತಾಪಮಾನ ಏರಿಕೆ ಮತ್ತು ಹವಾಮಾನ ಬದಲಾವಣೆಯ ಪರಿಣಾಮ ತಗ್ಗಿಸಲು ಕರ್ನಾಟಕ ರಾಜ್ಯ ಕ್ರಿಯಾ ಯೋಜನೆ ರೂಪಿಸಲಾಗಿದ್ದು, ಇದರ ಸಮರ್ಪಕ ಅನುಷ್ಠಾನಕ್ಕೆ ಕ್ರಮ ವಹಿಸಲು ಸೂಚಿಸಲಾಗಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ತಿಳಿಸಿದ್ದಾರೆ. ಕರ್ನಾಟಕ ಮಾಧ್ಯಮ ಅಕಾಡಮಿ ಆಯೋಜಿಸಿದ್ದ ವಿಪರೀತ ಬಿಸಿ ಮತ್ತು ಬೆಂಗಳೂರಿನ ಮೇಲೆ ಅದರ ಪರಿಣಾಮ ಕುರಿತ ವಿಚಾರ ಸಂಕಿರಣದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಈ ಕ್ರಿಯಾ ಯೋಜನೆಯನ್ನು ರಾಜ್ಯ ಸರ್ಕಾರದ ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಜಾರಿಗೆ ತರಲು ಪರಿಸರ ನಿರ್ವಹಣೆ ಮತ್ತು ನೀತಿ ಸಂಶೋಧನಾ ಸಂಸ್ಥೆ ಕ್ರಮ ಕೈಗೊಂಡಿದೆ ಎಂದು ಹೇಳಿದ್ದಾರೆ. ಹವಾಮಾನ-ಚೇತರಿಕೆಗೆ ಸಂಬಂಧಿಸಿದಂತೆ ಉತ್ತಮ ರೂಢಿಗಳ ಮಾಹಿತಿ ಹಂಚಿಕೊಳ್ಳಲು ಏಪ್ರಿಲ್ ೨೦೨೫ರಲ್ಲಿ ಸಮರ್ಪಿತ ರೇಡಿಯೋ ಕಾರ್ಯಕ್ರಮ "ಹವಮಾನ ಮಿತ್ರ" ಪ್ರಾರಂಭಿಸಲಾಗಿದೆ. ಈವರೆಗೆ ೨೪ ಕಾರ್ಯಕ್ರಮಗಳನ್ನು ಆಕಾಶವಾಣಿಯಲ್ಲಿ ಪ್ರಸಾರ ಮಾಡಲಾಗಿದೆ. ಈ ಮೂಲಕ ಜನಜಾಗೃತಿ ಮೂಡಿಸುವ ಪ್ರಯತ್ನಗಳು ನಡೆದಿವೆ ಎಂದು ಸಚಿವರು ಸ್ಪಷ್ಟಪಡಿಸಿದ್ದಾರೆ. ಕಳೆದ ೩ ವರ್ಷದ ಅವಧಿಯಲ್ಲಿ ರಾಜ್ಯದಲ್ಲಿ ಸುಮಾರು ೧೧ ಕೋಟಿ ಸಸಿಗಳನ್ನು ನಡೆಲಾಗಿದೆ. ಬೆಂಗಳೂರಿನಲ್ಲಿ ಏರ್ ಶೋ ನಡೆಯುವ ಗಂಟಿಗಾನಹಳ್ಳಿಯಲ್ಲಿರುವ ಯಲಹಂಕ ವಾಯುನೆಲೆ ಕೂಡ ಅರಣ್ಯ ಭೂಮಿಯಾಗಿದೆ. ಭಾರತೀಯ ವಾಯುಪಡೆ ಈ ಪ್ರದೇಶವನ್ನು ಪ್ರಸ್ತುತ ರನ್ ವೇ ಅಗಿ ಉಪಯೋಗಿಸುತ್ತಿದೆ. ಆದರೆ ಆರ್‌ಟಿಸಿ ಮತ್ತು ಮ್ಯುಟೇಶನ್ ಅರಣ್ಯ ಇಲಾಖೆಯ ಹೆಸರಿನಲ್ಲಿದೆ. ಈ ಜಮೀನು ಕೂಡ ಭೂ ಪರಿವರ್ತನೆ ಆಗಿಲ್ಲ. ಹೀಗಾಗಿ ಅರಣ್ಯ ಭೂಮಿಯನ್ನೂ ತೆರವು ಮಾಡಿಸಲಾಗುವುದು ಎಂದು ಹೇಳಿದ್ದಾರೆ.

<><*<><>*><>

ಲೋಕಭವನದಲ್ಲಿ ನಿರ್ಮಿಸಿರುವ ನವೀಕೃತ ಸ್ವಾಗತ ಕೇಂದ್ರ ಮತ್ತು ಕಾಮಧೇನು ಲೋಕವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಉದ್ಘಾಟಿಸಿದರು. ಈ ಸಂದರ್ಭದಲ್ಲಿ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಉಪಸ್ಥಿತರಿದ್ದರು. ಬಳಿಕ ಗೋಶಾಲೆಗೆ ತೆರಳಿದ ನಾಯಕರು ಗೋವುಗಳಿಗೆ ಹಣ್ಣುಗಳನ್ನು ತಿನ್ನಿಸಿದರು. ಬಳಿಕ, ರಾಜಭವನದ ಆವರಣದಲ್ಲಿ ಮಹಾಘನಿ ಸಸಿ ನೆಟ್ಟರು.

**<><*<><>*><>**

ರಾಷ್ಟ್ರೀಯ ಭದ್ರತೆ ವಿಷಯದಲ್ಲಿಯೂ ಕಾಂಗ್ರೆಸ್ ಮತಬ್ಯಾಂಕ್ ರಾಜಕೀಯದಲ್ಲಿ ತೊಡಗಿದೆ ಎಂದು ವಿಧಾನಸಭೆ ಪ್ರತಿಪಕ್ಷ ನಾಯಕ ಆರ್.ಅಶೋಕ ಆರೋಪಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ಮಂಗಳೂರು ಕುಕ್ಕರ್ ಬಾಂಬ್ ಸ್ಫೋಟ ಪ್ರಕರಣದಲ್ಲಿ ಭಯೋತ್ಪಾದಕರ ಪರ ನಿಂತಿದ್ದ ಕಾಂಗ್ರಸ್ ನಾಯಕರಿಗೆ ಈಗ ಸತ್ಯದ ದರ್ಶನವಾಗಿದೆ ಎಂದು ಲೇವಡಿ ಮಾಡಿದ್ದಾರೆ. ಕಾಂಗ್ರೆಸ್ ನಾಯಕರು ಇನ್ನುಮುಂದೆ ಇಂತಹವರನ್ನು ಸಮರ್ಥನೆ ಮಾಡಿಕೊಳ್ಳದಂತೆ ಅವರು ಸಲಹೆ ನೀಡಿದ್ದಾರೆ.

**<><*<><>*><>**

ಬೇಸಿಗೆ ಹಿನ್ನೆಲೆಯಲ್ಲಿ ಮಂಡ್ಯ ಜಿಲ್ಲೆಯ ಗ್ರಾಮಾಂತರ ಪ್ರದೇಶಗಳ ಸಾರ್ವಜನಿಕರಿಗೆ ಕುಡಿಯುವ ನೀರು ಸರಬರಾಜಿನಲ್ಲಿ ಯಾವುದೇ ತೊಂದರೆ ಉಂಟಾಗದಂತೆ ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಲು ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಜಿಲ್ಲಾಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ನಂದಿನಿ ತಿಳಿಸಿದ್ದಾರೆ. ಮಂಡ್ಯ ಜಿಲ್ಲೆಯ ಗ್ರಾಮಾಂತರ ಪ್ರದೇಶಗಳಲ್ಲಿ ಒಟ್ಟು ೨೮೯ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗಬಹುದೆಂದು ಅಂದಾಜಿಸಲಾಗಿದೆ. ಈಗಾಗಲೇ ೧೩ ಗ್ರಾಮಗಳಲ್ಲಿ ಖಾಸಗಿ ಕೊಳವೆಬಾವಿಗಳ ಮೂಲಕ ಪರ್ಯಾಯವಾಗಿ ಕುಡಿಯುವ ನೀರು ಸರಬರಾಜು ಮಾಡುವ ವ್ಯವಸ್ಥೆ ಕಲ್ಪಿಸಲಾಗಿದೆ. ಉಳಿದ ಗ್ರಾಮಗಳಲ್ಲಿಯೂ ಅಗತ್ಯವಿರುವ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಲು ಸಂಬಂಧಿತ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಹೇಳಿದ್ದಾರೆ. ಅಗತ್ಯವಿರುವ ಕಡೆಗಳಲ್ಲಿ ವಿದ್ಯುತ್ ಸಂಪರ್ಕ ಕಲ್ಪಿಸುವುದು ಹಾಗೂ ಮೋಟಾರ್‌ಗಳು ಕೆಟ್ಟು ಹೋದಲ್ಲಿ ತಕ್ಷಣವೇ ದುರಸ್ತಿ ಕೈಗೊಳ್ಳುವಂತೆ ನಿರ್ದೇಶನ ನೀಡಿದ್ದಾರೆ.

**<><*<><>*><>**

ಪ್ರಸಕ್ತ ಬೇಸಿಗೆಯಲ್ಲಿ ಕೆಲ ಗ್ರಾಮೀಣ ಪ್ರದೇಶಗಳಲ್ಲಿ ದಿನದಿಂದ ದಿನಕ್ಕೆ ಕುಡಿಯುವ ನೀರಿನ ಸಮಸ್ಯೆ ತಲೆದೋರುತ್ತಿದೆ. ಕುಡಿಯುವ ನೀರಿನ ಸಮಸ್ಯೆ ಪರಿಹಾರಕ್ಕಾಗಿ ಜಿಲ್ಲಾಪಂಚಾಯಿತಿ ಟ್ಯಾಂಕರ್ ಹಾಗೂ ಖಾಸಗಿ ಬೊರವೆಲ್ ಗಳ ಮೂಲಕ ನೀರು ಪೂರೈಕೆ ಸಹ ಮಾಡುತ್ತಿದೆ ಎಂದು ಉತ್ತರಕನ್ನಡ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ದಿಲೀಷ್ ಶಶಿ ತಿಳಿಸಿದ್ದಾರೆ. ಉತ್ತರಕನ್ನಡ ಜಿಲ್ಲೆಯ ೩೦ಕ್ಕೂ ಹೆಚ್ಚು ಗ್ರಾಮ ಪಂಚಾಯಿತಿಗಳ ನಲವತ್ತಕ್ಕೂ ಹೆಚ್ಚು ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಗುರುತಿಸಿ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಲಾಗುತ್ತಿದೆ ಎಂದು ಹೇಳಿದ್ದಾರೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>